# ಸುರತ್ಕಲ್ ಎನ್‌ಐಟಿಕೆಗೆ ನಾಮನಿರ್ದೇಶನ

**ಮಂಗಳೂರು:** ಕರ್ನಾಟಕ ಸರಕಾರವು ರಾಜ್ಯದ ಪ್ರತಿಷ್ಠಿತ ಸಂಸ್ಥೆಯಾದ ಸುರತ್ಕಲ್‌ನ ಎನ್‌ಐಟಿಕೆಯ ಆಡಳಿತ ಮಂಡಳಿಗೆ ಉದ್ಯಮಿ ಮತ್ತು ಸುಪ್ರಜಿತ್ ಗ್ರೂಪ್‌ನ ಸಂಸ್ಥಾಪಕ ಮತ್ತು ಅಧ್ಯಕ್ಷ ಕೆ. ಅಜಿತ್ ಕುಮಾರ್ ರೈ ಅವರನ್ನು ರಾಜ್ಯ ಸರ್ಕಾರದ ಪ್ರತಿನಿಧಿಯಾಗಿ ನಾಮನಿರ್ದೇಶನ ಮಾಡಿದೆ.

ಇವರು ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಮೆಕ್ಯಾನಿಕಲ್ ಇಂಜಿನಿಯರಿಂಗ್‌ನಲ್ಲಿ ಪದವಿ ಹಾಗೂ ಕೆನಡಾ ವಿಶ್ವವಿದ್ಯಾಲಯದಿಂದ ಕೈಗಾರಿಕಾ ಇಂಜಿನಿಯರಿಂಗ್‌ನಲ್ಲಿ ಸ್ನಾತಕೋತ್ತರ ಪದವಿ ಪಡೆದಿದ್ದಾರೆ.

ಇವರ ನೇತೃತ್ವದ ಸುಪ್ರಜಿತ್ ಗ್ರೂಪ್ ಆಫ್ ಕಂಪನಿಯು ಆಟೋಮೋಟಿವ್ ಲೈಟಿಂಗ್, ಹ್ಯಾಲೊಜೆನ್ ಬಲ್ಬ್‌ಗಳು ಮತ್ತುಕೇಬಲ್ ತಯಾರಕ ಮತ್ತು ದ್ವಿಚಕ್ರ ಕೇಬಲ್ ಮಾರುಕಟ್ಟೆಯಲ್ಲಿ ಜಾಗತಿಕ ನಾಯಕ ಸಂಸ್ಥೆಯಾಗಿದ್ದು ಚೀನಾ, ಯುಎಸ್‌ಎ, ಮೆಕ್ಸಿಕೊ, ಇಂಗ್ಲೆಂಡ್, ಹಂಗೇರಿ, ಸ್ಲೊವೇನಿಯಾ, ಲಕ್ಸೆಂಬರ್ಗ್ ಮತ್ತು ಜರ್ಮನಿ ಸೇರಿದಂತೆ ವಿವಿಧ ದೇಶಗಳಲ್ಲಿ ವ್ಯವಹಾರ ಹೊಂದಿದೆ.



ವಿದ್ಯಾರ್ಥಿ ವೇತನದ ಮೂಲಕ ಶಿಕ್ಷಣವನ್ನು ಮುಂದುವರಿಸಲು ವಿದ್ಯಾರ್ಥಿಗಳಿಗೆ ಹಣಕಾಸಿನ ನೆರವು, ಶಾಲೆಗಳು ಮತ್ತು ಅಂಗನವಾಡಿ ಕೇಂದ್ರಗಳ ಉನ್ನತೀಕರಣದಲ್ಲಿ ನೆರವು, ಸರಕಾರಿ ಪ್ರೌಢ ಶಾಲೆ (ಆರ್‌ಎಮ್‌ಎಸ್‌ಎ) ವಿಟ್ಲ ಇದಕ್ಕೆ ಪೀಠೋಪಕರಣ ಸಹಿತ ಕಟ್ಟಡ ನಿರ್ಮಾಣ, ತರಬೇತಿ ಮತ್ತು ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಬೆಂಬಲ, ವಿವಿಧ ವೈದ್ಯಕೀಯ ನೆರವು ಅಗತ್ಯವಿರುವವರಿಗೆ ಆರೈಕೆ ಹಾಗೂ ಚಿಕಿತ್ಸಾಸೇವೆಗಳನ್ನು ಒದಗಿಸುವ ಮೂಲಕ ಸಾಮಾಜಿಕ ಕಾಳಜಿಯನ್ನೂ ಕೆ. ಅಜಿತ್ ಕುಮಾರ್ ರೈ ಹೊಂದಿದ್ದಾರೆ.

Hosa Digantha, Date: 10/11/23, p, no - 03